ಇ) ವಿದ್ಯಾಪೀಠಗಳಿಂದ ಬರುತ್ತಿರುವ ಸರಾಸರಿ ವಾರ್ಷಿಕ ಆದಾಯ ರೂ. 17,47,695.00

ಗ್ರಾಮಾಂತರ ಪ್ರದೇಶದ ಯುವಕ-ಯುವತಿಯರಿಗೆ ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಯನ್ನು ಉತ್ತಮ ಪಡಿಸಿಕೊಳ್ಳಲು ವಿವಿಧ ವೃತ್ತಿಗಳನ್ನು ತರಬೇತಿ ನೀಡಲು ಬಳಸಲಾಗುತ್ತಿದೆ.

ಈ) ಹೌದು

ಉ) ವಿದ್ಯಾಪೀಠಗಳ ಆಸ್ತಿ ಮತ್ತು ಜಮೀನನ್ನು ಅಕ್ರಮವಾಗಿ ಸ್ವಾಧೀನಮಹಿಸಿರುವ ಪ್ರಕರಣಗಳು ಯಾವುದೂ ಇಲ್ಲ.

ಉದ್ಭವಿಸುವುದಿಲ್ಲ.

ಗ್ರಾಮೀಣಾಭಿವೃದ್ಧಿ ಸಂಸ್ಥೆಗಳು

1727 (2058) ಶ್ರೀ ಗುರುಸ್ವಾಮಿ ಎ.ಎಸ್ (ಚಾಮುಂಡೇಶ್ವರಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಈವರೆಗಿನ ಅನುಭವದ ಹಿನ್ನೆಲೆಯಲ್ಲಿ ಸಂಸ್ಥೆಗಳ ಬಲವರ್ಧನೆಗೆ ಮೂರು ಹಂತದಲ್ಲೂ ಎರಡು ಹಂತದ ಸಂಸ್ಥೆಯ ಕಾರ್ಯನಿರ್ವಹಣೆ ಜಾರಿಗೆ ತರುವ ಇಚ್ಛೆ ಸರ್ಕಾರಕ್ಕೆ ಇದೆಯೇ?

2) ಈಗಿರುವ ವ್ಯವಸ್ಥೆಯಲ್ಲಿ ಅಧಿಕಾರ ದುರುಪಯೋಗ ಲಂಚಾವತಾರ ಅಭಿವೃದ್ಧಿ ಕಾರ್ಯಕ್ರಮಗಳಲ್ಲಿ ನಂಬಿಕೆ ಇಲ್ಲದ ಅಧಿಕಾರಿ ಸಿಬ್ಬಂದಿಯವರ ಕಾರ್ಯನಿರ್ವಹಣೆ ಇವುಗಳನ್ನು ಸರಿಪಡಿಸಿ, ಪಂಚಾಯತ್ ರಾಜ್ ಸಂಸ್ಥೆಗಳನ್ನು ಬಲಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು?

3) ಗ್ರಾಮ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯತಿ ಹಾಗೂ ಜಿಲ್ಲಾ ಪಂಚಾಯತಿ ಮಟ್ಟದಲ್ಲಿ ಅಧಿಕಾರಶಾಹಿ ಮತ್ತು ನೌಕರಶಾಹಿಯನ್ನು ಹದ್ದುಬಸ್ತಿನಲ್ಲಿಡಲು ಕೈಗೊಂಡಿರುವ ಕ್ರಮಗಳೇನು?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

1) ಇಲ್ಲ

2) 1) ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 111, 112, 113, 155, 156, 157, 196, 197 ಹಾಗೂ 198 ರಲ್ಲಿ ಪಂಚಾಯತ್ ಸಂಸ್ಥೆಗಳ ಅಧಿಕಾರಿಗಳ ಹಾಗೂ ಸಿಬ್ಬಂದಿಗಳ ಕಾರ್ಯವ್ಯಾಪ್ತಿ ಇತ್ಯಾದಿಗಳನ್ನು ಕುರಿತು ಉಪಬಂಧಗಳನ್ನು ಮಾಡಲಾಗಿದೆ.

2. ಗ್ರಾಮ ಪಂಚಾಯತಿಗಳಲ್ಲಿ ಸಾಮಾಜಿಕ ಲೆಕ್ಕಪತ್ರ ಪರಿಶೋಧನೆಯಂತಹ ಜಮಾಬಂಧಿ ಕಾರ್ಯಕ್ರಮವನ್ನು ಪ್ರಾರಂಭಿಸಲಾಗಿದೆ.

3. ಜನಪ್ರತಿನಿಧಿಗಳ, ಸಿಬ್ಬಂದಿಗಳ ಮತ್ತು ಸಾರ್ವಜನಿಕರ ಸಾಮರ್ಥ್ಯ ವೃದ್ಧಿಸುವ ಜವಾಬ್ದಾರಿಗಳನ್ನು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆಗೆ ಮಹಿಸಲಾಗಿದೆ.

3) ತಾಲ್ಲೂಕು ಮತ್ತು ಜಿಲ್ಲಾ ಪಂಚಾಯತ್ ಮಟ್ಟದಲ್ಲಿ ಅಧ್ಯಕ್ಷರುಗಳನ್ನು ಸಂಬಂಧಪಟ್ಟ ಸಂಸ್ಥೆಯ ಕಾರ್ಯಕಾರಿ ಮುಖ್ಯಸ್ಥರನ್ನಾಗಿ ಮಾಡಲಾಗಿದೆ. ಗ್ರಾಮ ಪಂಚಾಯತಿಗಳಲ್ಲಿಯೂ

ಅಧ್ಯಕ್ಷರುಗಳನ್ನು ಕಾರ್ಯಕಾರಿ ಮುಖ್ಯಸ್ಥರನ್ನಾಗಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ. ಆದ್ದರಿಂದ, ಸಿಬ್ಬಂದಿಗಳು ಅಧ್ಯಕ್ಷರ ನೇರ ನಿಯಂತ್ರಣಕ್ಕೆ ಒಳಪಡುತ್ತಾರೆ.

ಹಾಸನ ಪಟ್ಟಣದ ಜಯಚಾಮರಾಜೇಂದ್ರ ಆಸ್ಪತ್ರೆಗೆ ಸಲಹಾ ಸಮಿತಿ ನೇಮಕ

1728 (2096) ಶ್ರೀ ಹನುಮೇಗೌಡ ಕೆ.ಹೆಚ್ (ಹಾಸನ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಾಸನ ಪಟ್ಟಣದ ಜಯಚಾಮರಾಜೇಂದ್ರ ಆಸ್ಪತ್ರೆಗೆ (ಜಿಲ್ಲಾ ಆಸ್ಪತ್ರೆ) ಇದುವರೆವಿಗೂ ಸಲಹಾ ಸಮಿತಿಯನ್ನು ಸರ್ಕಾರ ರಚಿಸದಿರಲು ಕಾರಣಗಳೇನು? (ವಿವರ ಒದಗಿಸುವುದು)

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಸೂಕ್ತ ಅಧಿಕಾರೇತರ ಸದಸ್ಯರನ್ನು ಗುರುತಿಸುವುದರಲ್ಲಿ ಸ್ವಲ್ಪ ತಡವಾಗಿರುತ್ತದೆ.

ಹಳೇ ಹುಬ್ಬಳ್ಳಿ ಈಶ್ವರ ನಗರ ಮಾರ್ಗದ ರಸ್ತೆ ದುರಸ್ತಿ ಕುರಿತು

1729 (969) ಶ್ರೀ ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್ (ಹುಬ್ಬಳ್ಳಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಹಳೇ ಹುಬ್ಬಳ್ಳಿ ಈಶ್ವರ ನಗರ ಮಾರ್ಗವಾಗಿ ಮಾವನೂರ ಗ್ರಾಮಕ್ಕೆ ಹೋಗುವ ರಸ್ತೆ ಕೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

2) ಸದರಿ ರಸ್ತೆ ಡಾಂಬರೀಕರಣ ಮಾಡಲಿಕ್ಕೆ ಸರಕಾರ ಹಣ ಬಿಡುಗಡೆ ಮಾಡಿದೆಯೇ;

3) ಸದರಿ ರಸ್ತೆಗೆ ತಗಲುವ ಅಂದಾಜು ವೆಚ್ಚವೆಷ್ಟು;

4) ಕಾಮಗಾರಿ ಯಾವಾಗ ಕೈಗೆತ್ತಿಕೊಳ್ಳಲಾಗುವುದು?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

1) ಸರ್ಕಾರದ ಗಮನಕ್ಕೆ ಬಂದಿದೆ

2) ರೂ. 61.52 ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ.

3) ರೂ. 61.52 ಲಕ್ಷಗಳು

4) ಈ ಕಾಮಗಾರಿಯ ಕೆಲಸ ಪ್ರಗತಿಯಲ್ಲಿದ್ದು, 2002ರ ನವೆಂಬರ್ ಅಂತ್ಯಕ್ಕೆ ಪೂರ್ಣಗೊಳಿಸಲಾಗುವುದು.

ಧಾರವಾಡ ಜಿಲ್ಲೆಯಲ್ಲಿ ಆರೋಗ್ಯ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳು

1730 (2028) ಶ್ರೀ ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್ (ಹುಬ್ಬಳ್ಳಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಧಾರವಾಡ ಜಿಲ್ಲೆಯಲ್ಲಿ ಖಾಲಿ ಇರುವ ವೈದ್ಯರ, ದೌದಿಯರ, ಲ್ಯಾಬ್ ಟೆಕ್ನಿಶಿಯನ್, ಸಹಾಯಕರ ಹಾಗೂ ಜವಾನರ ಹುದ್ದೆಗಳೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

ಆ) ಖಾಲಿ ಇರುವ ಮೇಲ್ಕಂಡ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡು ಕ್ರಮವೇನು;

ಇ) ನೇಮಕಾತಿ ಪ್ರಕ್ರಿಯೇ ಪ್ರಾರಂಭವಾಗಿದೆಯೇ?